ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ :ಸಿ7(8), ಆರ್‌ಟಿಇ/ದಾ.ಪತ್ರ/2019-20 ದಿನಾಂಕ:23.04.2019

**::ಜ್ಞಾಪನ::**

**ವಿಷಯ:** ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ 2009 ರಡಿಯಲ್ಲಿ ಪ್ರವೇಶ ಪಡೆದಿರುವ ಮಕ್ಕಳನ್ನು ಎಲಿಮೆಂಟರಿ ಶಿಕ್ಷಣ ಪೂರೈಸುವವರೆಗೆ ಅದೇ ಶಾಲೆಯಲ್ಲಿ ಮುಂದುವರೆಸುವ ಬಗ್ಗೆ

**ಉಲ್ಲೇಖ:**1) ಸರ್ಕಾರದ ಆದೇಶ ಸಂಖ್ಯೆ: ಇಡಿ 176 ಪಿಜಿಸಿ 2019 ದಿನಾಂಕ:27.03.2019

@@@@@

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ-2009 ರ ಅಡಿಯಲ್ಲಿ ಪ್ರವೇಶ ಪಡೆದಿರುವಂತಹ ಮಕ್ಕಳನ್ನು ಕೆಲವು ಖಾಸಗಿ ಅನುದಾನರಹಿತ ಶಾಲೆಗಳು ಸಿಬಿಎಸಿ/ಐಸಿಎಸಿ/ಇತರೆ ಕೇಂದ್ರ ಪಠ್ಯ ಕ್ರಮದ ಶಾಲೆಗಳು ವಿವಿಧ ಕಾರಣಗಳ ನೆಪವೊಡ್ಡಿ ವಿದ್ಯಾರ್ಥಿಗಳನ್ನು ಶಾಲೆಯಿಂದ ಎಲಿಮೆಂಟರಿ ಶಿಕ್ಷಣ ಪೂರೈಸುವ ಮುನ್ನವೇ ವರ್ಗಾವಣೆ ಪ್ರಮಾಣಪತ್ರ ನೀಡಿ ಹೊರಹಾಕುತ್ತಿರುವ ಬಗ್ಗೆ ವಿವಿಧ ಶಾಲೆಗಳ ಪೋಷಕರು ಸರ್ಕಾರಕ್ಕೆ ದೂರನ್ನು ಸಲ್ಲಿಸಿರುತ್ತಾರೆ. ಈ ಕುರಿತಂತೆ ಭಾರತ ಸರ್ಕಾರವು ಶಿಕ್ಷಣ ಹಕ್ಕು ಕಾಯಿದೆಯ (ತಿದ್ದುಪಡಿ) ಕಾಯ್ದೆ 2019 ನ್ನು ದಿನಾಂಕ: 11.01.2019 ರಂತೆ ತಿದ್ದುಪಡಿ ಮಾಡಿದ್ದು ಸದರಿ ಶಿಕ್ಷಣ ಹಕ್ಕು ಕಾಯಿದೆಯ ಸೆಕ್ಷನ್ 16(4) ರ ತಿದ್ದುಪಡಿಯನ್ವಯ ಶಿಕ್ಷಣ ಹಕ್ಕು ಕಾಯಿದೆಯಡಿ ದಾಖಲಾದ ಯಾವುದೇ ಮಗುವನ್ನು ಪ್ರಾಥಮಿಕ ಶಿಕ್ಷಣ ಪೂರೈಸುವವರೆಗೆ ಹೊರಹಾಕತಕ್ಕದ್ದಲ್ಲ ಎಂಬ ಬಗ್ಗೆ ಉಲ್ಲೇಖಿತ ಸುತ್ತೋಲೆಯನ್ನು ಹೊರಡಿಸಿದ್ದು (ಪ್ರತಿ ಲಗತ್ತಿಸಿದೆ) ಈ ಸುತ್ತೋಲೆಯನ್ವಯ ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲೆಗಳಿಗೆ ಸೂಕ್ತ ನಿರ್ದೇಶನ ನೀಡಿ ಕ್ರಮವಹಿಸಲು ತಿಳಿಸಿದೆ.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

23-4-19

ಇವರಿಗೆ,

1) ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ

ಪ್ರತಿಯನ್ನು

1) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಿಕ್ಷಣ ಇಲಾಖೆ ಬಹುಮಹಡಿಗಳ ಕಟ್ಟಡ ಬೆಂಗಳೂರು ರವರಿಗೆ ಮಾಹಿತಿಗಾಗಿ